PW-1 ಗೋವಿಂದರೆಡ್ಡಿ

Date: 18.03.2026

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲು 2 ನೇ ಎದುರುದಾರರ ಪರ ಶ್ರೀ ಬಿ ಎಂ ಆರ್ ಸಿ ವಕೀಲರಿಂದಃ**

ನಾನು ರಾಂಪುರ ಗ್ರಾಮದ ವಾಸಿ. ನಾನು 7 ನೇ ತರಗತಿ ವರೆಗೆ ವಿದ್ಯಾಭ್ಯಾಸ ಮಾಡಿರುತ್ತೇನೆ. 1 ನೇ ಎದುರುದಾರರು ರಾಮಸಾಗರ ಗ್ರಾಮದ ವಾಸಿ. 1 ನೇ ಎದುರುದಾರರ ಯರೀಸ್ವಾಮಿ ರವರು ಜೀವಂತವಾಗಿ ಇದ್ದಾರೆ. ನಾನು ಪ್ರಸ್ತುತ ಅರ್ಜಿಯನ್ನು ದಿನಾಂಕ 11.11.2012 ರಂದು ಆದ ಅಪಘಾತಕ್ಕೆ ಸಂಬಂದಿಸಿದಂತೆ ಸಲ್ಲಿಸಿದ್ದೇನೆ ಎಂದರೆ ಸರಿ. ಪೊಲೀಸರು ಸಲ್ಲಿಸಿದ ದೋಷಾರೋಪಣ ಪಟ್ಟಿ ಪ್ರಕಾರ ಸುಮಾರು 16 ಜನರು ಅಪಘಾತದಲ್ಲಿ ಗಾಯಗೊಂಡಿದ್ದಾರೆ ಎಂದು ನಮೂದಿಸಲಾಗಿದೆ ಎಂದರೆ ಸಾಕ್ಷಿ ಸುಮಾರು 13-14 ಜನರು ಗಾಯಗೊಂಡಿದ್ದರು ಎಂದು ನುಡಿದಿರುತ್ತಾರೆ. ಪೊಲೀಸರು ದೋಷಾರೋಪಣ ಪಟ್ಟಿಯನ್ನು ನನ್ನ ವಿರುದ್ದವೆ ಸಲ್ಲಿಸಿದ್ದಾರೆ ಎಂದರೆ ಸರಿ. ಅಪಘಾತವಾದ ಕೂಡಲೇ ನಾನು ರಾಂಪುರದ ಸಮುದಾಯ ಕೇಂದ್ರಕ್ಕೆ ಹೋಗಿದ್ದೆನು ಎಂದರೆ ಸರಿ. ನನಗೆ ಆದ ಗಾಯಗಳಿಗೆ ಪ್ರಥಮ ಚಿಕಿತ್ಸೆಯನ್ನು ನೀಡಿ ಹೆಚ್ಚಿನ ಚಿಕಿತ್ಸೆಗಾಗಿ ಬಳ್ಳಾರಿಯ ವಿಮ್ಸ್ ಆಸ್ಪತ್ರೆಗೆ ಕಳುಹಿಸಿ ಕೊಡಲಾಯಿತು ಎಂದರೆ ಸರಿ. ರಾಂಪುರದ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಎಕ್ಸರೆ ಸೌಲಭ್ಯ ಇರಲಿಲ್ಲ ಎಂದರೆ ಸರಿ. ಸದರಿ ಆಸ್ಪತ್ರೆಯಲ್ಲಿ ನಾನು ಒಳರೋಗಿಯಾಗಿ ಚಿಕಿತ್ಸೆ ಪಡೆದಿಲ್ಲ ಎಂದರೆ ಸರಿ. ವಿಮ್ಸ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದುಕೊಂಡ ಬಗ್ಗೆ ನಾನು ಯಾವುದೇ ದಾಖಲಾತಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿಲ್ಲ ಎಂದರೆ ಸರಿ. ನನಗೆ ತೀವ್ರ ಸ್ವರೂಪದ ಗಾಯಗಳು ಆದ ಬಗ್ಗೆ ನಾನು ನ್ಯಾಯಾಲಯಕ್ಕೆ ಯಾವುದೇ ದಾಖಲಾತಿ ಸಲ್ಲಿಸಿಲ್ಲ ಎಂದರೆ ಸಾಕ್ಷಿ ನನಗೆ ತೀವ್ರ ಸ್ವರೂಪದ ಗಾಯಗಳಾಗಿದ್ದವು ಆದರೆ ನಾನು ನ್ಯಾಯಾಲಯಕ್ಕೆ ದಾಖಲಾತಿಗಳನ್ನು ಸಲ್ಲಿಸಿಲ್ಲ ಎಂದು ನುಡಿದಿರುತ್ತಾರೆ. ನನಗೆ ನನ್ನ ದುಡಿಮೆಯ ಸಾಮರ್ಥ್ಯದ ನಷ್ಟ ಅಥವಾ ಅಂಗನ್ಯೂನತೆ ಬಗ್ಗೆ ನಾನು ನ್ಯಾಯಾಲಯಕ್ಕೆ ಯಾವುದೇ ದಾಖಲಾತಿ ಹಾಜರುಪಡಿಸಿಲ್ಲ ಎಂದರೆ ಸರಿ. ನನಗೆ ಚಾಲನಾ ಪರವಾನಿಗೆ ಇದ್ದ ಬಗ್ಗೆ ನಾನು ಯಾವುದೇ ದಾಖಲಾತಿಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿಲ್ಲ ಎಂದರೆ ಸರಿ. ಈ ಅರ್ಜಿಯನ್ನು ಸಲ್ಲಿಸುವ ಪೂರ್ವದಲ್ಲಿ 1 ಮತ್ತು 2 ನೇ ಎದುರುದಾರರಿಗೆ ನೋಟಿಸು ನೀಡಿದ ಬಗ್ಗೆ ನಾನು ಯಾವುದೇ ದಾಖಲಾತಿಯನ್ನು ನಾನು ನ್ಯಾಯಾಲಯಕ್ಕೆ ಹಾಜರುಪಡಿಸಿಲ್ಲ ಎಂದರೆ ಸರಿ.

ನನಗೆ ಚಾಲನಾ ಪರವಾನಿಗೆ ಪತ್ರ ಇರಲಿಲ್ಲ ಮತ್ತು ವಿಮಾ ಪಾಲಿಸಿ ಷರತ್ತು ಉಲ್ಲಂಘನೆಯಾದ ಕಾರಣ 2ನೇ ಎದುರುದಾರರು ನನಗೆ ಯಾವುದೇ ಪರಿಹಾರದ ಹಣವನ್ನು ಕೊಡುವ ಬಾಧ್ಯಸ್ಥಿಕೆಯನ್ನು ಹೊಂದಿಲ್ಲ ಎಂದರೆ ಸರಿಯಲ್ಲ.

1ನೇ ಎದುರುದಾರರು ನನಗೆ ಮಾಸಿಕ 8000/-ಸಂಬಳವನ್ನು ನೀಡುತ್ತಿದ್ದರು ಎಂದು ತೋರಿಸಲು ನಾನು ಯಾವುದೇ ದಾಖಲಾತಿಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿಲ್ಲ ಎಂದರೆ ಸರಿ. ಪರಿಹಾರ ಪಡೆಯಲು ನಾನು ನ್ಯಾಯಾಲಯಕ್ಕೆ ಸುಳ್ಳು ಅರ್ಜಿಯನ್ನು ಸಲ್ಲಿಸಿ ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು).

ಓ.ಹೇ.ಕೇ. ಸರಿ ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಚಳ್ಳಕೆರೆ